# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ, ಬೆಂಗಳೂರು.
## ಸೆಪ್ಟಂಬರ್ ಮಾಹೆಯ ವಾರ್ಡ್ ಸಮಿತಿ ಸಭೆಯ ನಡವಳಿಗಳು

***********

ವಿಷಯ: ಮಾನ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಕಛೇರಿ ಆದೇಶದ ಸಂಖ್ಯೆ: ಬಿ12(5)/ಪಿಆರ್/35/2020–21, ದಿನಾಂಕ: 21–09–2020ರ ಆದೇಶದಂತೆ ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

ದಿನಾಂಕ: 22–10–2021

ಸ್ಥಳ : ಬಿಬಿಎಂಪಿ ವಿವಿಧೋದ್ದೇಶ ಕಟ್ಟಡ, ಶ್ರೀಕಂಠೇಶ್ವರ ಪಾರ್ಕ್ ಹತ್ತಿರ

ಸಮಯ : ಬೆಳಿಗ್ಗೆ 11.00 ಗಂಟೆಗೆ

ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ದಯಾನಂದ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2 | ಶ್ರೀ ಜನಾರ್ಧನ್ .ಪಿ | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, (ಗಿರಿನಗರ) ಉಪವಿಭಾಗ |
| 3 | ಶ್ರೀಮತಿ ಶ್ವೇತಾ .ಬಿ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ 163, ಕತ್ರಿಗುಪ್ಪೆ |
| 4 | ಶ್ರೀ ಗಂಗಾಧರ್ | ಕಂದಾಯ ವಸೂಲಿಗಾರರು, ವಾರ್ಡ್ ನಂ. 163 |
| 5 | ಶ್ರೀ ಉಮೇಶ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–163 |
| 6 | ಶ್ರೀ ರವಿಕುಮಾರ್ .ಎಸ್ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–163 |
| 7 | ಶ್ರೀ ಪ್ರದೀಪ್ | ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 163 |
| 8 | ಶ್ರೀ ನಾಗರಾಜ್ | ಕೆಲಸ ಪರಿವೀಕ್ಷಕರು, ವಾರ್ಡ್ ನಂ. 163 |
| 9 | ಶ್ರೀ ವೆಂಕಟೇಶ್ | ಬಿ.ಎಲ್.ಓ ವಾರ್ಡ್ ನಂ. 163 |
| 10 | ಶ್ರೀಮತಿ ಸುಮ .ಎಲ್ | ಬಿ.ಎಲ್.ಓ ವಾರ್ಡ್ ನಂ. 163 |
| 11 | ಶ್ರೀ ಜಿ.ಕೆ ಪ್ರಸಾದ್ | ಬಿ.ಎಲ್.ಓ ವಾರ್ಡ್ ನಂ. 163 |
| 12 | ಶ್ರೀ ಪ್ರವೀಣ್ .ಎಸ್ | ಮಾರ್ಷಲ್ |
| 13 | ಶ್ರೀ ಸುಬ್ರಹ್ಮಣ್ಯಂ | ನಾಗರಿಕರು |
| 14 | ಶ್ರೀ ಜೆ. ನಾಗರಾಜ್ | ಕೆಲಸ ಪರಿವೀಕ್ಷಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ದಯಾನಂದ್ ರವರು ಸ್ವ ಪರಿಚಯ ಮಾಡಿಕೊಂಡು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಕತ್ರಿಗುಪ್ಪೆ ವಾರ್ಡ್-163ರ ವ್ಯಾಪ್ತಿಯಲ್ಲಿ ಬೆಸ್ಕಾಂ ರವರು ರಸ್ತೆ ಅಗೆತ ಮಾಡಿ ಕೇಬಲ್ ಅಳವಡಿಸಿದ್ದು, ಸರಿಯಾಗಿ ರಸ್ತೆಗಳನ್ನು ಸರಿಪಡಿಸದೇ ಇರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ಮತ್ತು ಸಾರ್ವಜನಿಕರು ತಿಳಿಸಿರುತ್ತಾರೆ. ಆದುದರಿಂದ, ಬೆಸ್ಕಾಂ ವತಿಯಿಂದ ಕೈಗೊಂಡಿರುವ ಕಾಮಗಾರಿಯನ್ನು ಆದಷ್ಟು ಬೇಗ ಪೂರ್ಣಗೊಳಿಸಿ ಅಗೆದಿರುವ ರಸ್ತೆಗಳನ್ನು ಸರಿಪಡಿಸದಿದ್ದಲ್ಲಿ ರಸ್ತೆ ಅಪಘಾತಗಳು ಸಂಭವಿಸುವ ಸಾಧ್ಯತೆ ಇರುತ್ತದೆ ಎಂದು ತಿಳಿಸಿದರು. ಹಾಗೂ ಹೆಚ್ಚುವರಿಯಾಗಿ ಸ್ಥಳದಲ್ಲೇ ಬಿಟ್ಟಿರುವ ಕೇಬಲ್‌ಗಳನ್ನು ತೆರವುಗೊಳಿಸಲು ಬೆಸ್ಕಾಂ ಅಧಿಕಾರಿಗಳಿಗೆ ಸೂಚಿಸುವಂತೆ ವಾರ್ಡ್ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿರುತ್ತಾರೆ.

2. ವಾರ್ಡ್ ವ್ಯಾಪ್ತಿಯಲ್ಲಿ ಮಳೆಗಾಲದ ಕಾರಣದಿಂದಾಗಿ ರಸ್ತೆಗುಂಡಿಗಳನ್ನು ಮುಚ್ಚುವುದು, ಚರಂಡಿಗಳನ್ನು ದುಸ್ಥಿಗೊಳಿಸುವುದು ಮತ್ತು ಹಾಳಾಗಿರುವ ರಸ್ತೆಗಳ ಕಾಮಗಾರಿಯನ್ನು ತುರ್ತಾಗಿ ಕೈಗೆತ್ತಿಕೊಂಡು ನಿರ್ವಹಿಸಲು ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು.

3. ವಾರ್ಡ್ ವ್ಯಾಪ್ತಿಯಲ್ಲಿ ಮಳೆಗಾಲದ ಕಾರಣದಿಂದಾಗಿ ಮರಗಳಲ್ಲಿನ ಒಣಗಿರುವ ರೆಂಬೆ ಕೊಂಬೆಗಳನ್ನು ಕೂಡಲೇ ತೆರವುಗೊಳಿಸಲು ತೋಟಗಾರಿಕೆ ಇಲಾಖೆಯವರಿಗೆ ಸೂಚಿಸುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು.

4. ಕತ್ರಿಗುಪ್ಪೆ ವಾರ್ಡ್–163ರ ವ್ಯಾಪ್ತಿಯಲ್ಲಿ ದಸರಾ ಹಬ್ಬದ ಕಾರಣದಿಂದಾಗಿ ಘನತ್ಯಾಜ್ಯ ನಿರ್ವಹಣೆಯನ್ನು ಸಮರ್ಪಕವಾಗಿ ವಿಂಗಡಿಸಿ ವಿಲೇವಾರಿ ಮಾಡಲಾಗಿರುತ್ತದೆ ಎಂದು ಹಾಗೂ ಕತ್ರಿಗುಪ್ಪೆ ವಾರ್ಡ್‌ನ್ನು 24 ಬ್ಲಾಕ್‌ಗಳಾಗಿ ವಿಂಗಡಿಸಿರುತ್ತಾರೆ. ಘನತ್ಯಾಜ್ಯ ನಿರ್ವಹಣೆಯ ವಾಹನಗಳಿಗೆ ಜಿ.ಪಿ.ಎಸ್.ನ್ನು ಅಳವಡಿಸಿರುತ್ತಾರೆ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಯಲ್ಲಿ ತಿಳಿಸಿರುತ್ತಾರೆ.

5. ಕತ್ರಿಗುಪ್ಪೆ ವಾರ್ಡ್–163ರ ಕಂದಾಯ ಪರಿವೀಕ್ಷಕರು ಕಂದಾಯ ಬಾಕಿ ಇರುವುದಾಗಿ ತಿಳಿಸಿ ಸದರಿ ಬಾಕಿಯನ್ನು ವಸೂಲಿ ಮಾಡಲು ವಾರ್ಡ್ ಮಟ್ಟದಲ್ಲಿ ಜಾತಾ ಕಾರ್ಯಕ್ರಮವನ್ನು ಹಮ್ಮಿಕೊಂಡು ಕಂದಾಯ ವಸೂಲಾತಿ ಮಾಡಲು ಕ್ರಮವಹಿಸಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ.

6. ಕತ್ರಿಗುಪ್ಪೆ ವಾರ್ಡ್–163ರ ವ್ಯಾಪ್ತಿಯಲ್ಲಿ ಮಾರ್ಷಲ್‌ಗಳು ಬ್ಲಾಕ್ ಸ್ಪಾಟ್‌ಗಳನ್ನು ಗುರುತಿಸಿ ಸದರಿ ಪ್ರದೇಶದಲ್ಲಿ ಕಸ ವನ್ನು ಬಿಸಾಡುವ ಸಾರ್ವಜನಿಕರಿಗೆ ದಂಡ ವಿಧಿಸುವ ಕ್ರಮಕೈಗೊಳ್ಳಬೇಕೆಂದು ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

7. ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ಹಿನ್ನೆಲೆಯಲ್ಲಿ ಕೋವಿಡ್ ಲಸಿಕೆಗಳನ್ನು ಸಮರ್ಪಕವಾಗಿ ನೀಡುತ್ತಿರುವುದಾಗಿ ಆರೋಗ್ಯ ಸಿಬ್ಬಂದಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

8. ಕತ್ರಿಗುಪ್ಪೆ ವಾರ್ಡ್–163ರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವುದರಿಂದ ಪಶು ಸಂಗೋಪಣಾ ಇಲಾಖೆಗೆ ದೂರು ನೀಡುವಂತೆ ವಾರ್ಡ್ ಅಭಿಯಂತರರಿಗೆ ತಿಳಿಸಲಾಯಿತು.

9. ಕತ್ರಿಗುಪ್ಪೆ ವಾರ್ಡ್–163ರ ವ್ಯಾಪ್ತಿಯ ಮುಖ್ಯರಸ್ತೆಗಳಲ್ಲಿ ಧೀರ್ಘಕಾಲದಿಂದ ಪಾದಚಾರಿ ಮಾರ್ಗದಲ್ಲಿ ಬೀದಿ ವ್ಯಾಪಾರಿಗಳು ಹೆಚ್ಚಾಗಿರುವುದು ಕಂಡುಬಂದಿದ್ದು, ಸದರಿ ಬೀದಿ ವ್ಯಾಪಾರಿಗಳನ್ನು ಕೂಡಲೇ ತೆರವುಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಯಿತು.

10. ಕತ್ರಿಗುಪ್ಪೆ ವಾರ್ಡ್–163ರ ವ್ಯಾಪ್ತಿಯ ಹಲವು ರಸ್ತೆಗಳಲ್ಲಿ ಖಾಸಗಿ ಕಂಪನಿಯಾದ ಜಿಯೋ ರವರು ಕೇಬಲ್ ಅಳವಡಿಸಲು ರಸ್ತೆಗಳನ್ನು ಅಗೆದಿದ್ದು, ಸದರಿ ರಸ್ತೆಗಳನ್ನು ಕೂಡಲೇ ದುರಸ್ಥಿಗೊಳಿಸಿ ರಸ್ತೆ ಬದಿಯಲ್ಲಿರುವ ಕೇಬಲ್‌ಗಳನ್ನು ತೆರವುಗೊಳಿಸುವಂತೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿರುತ್ತಾರೆ.

11. ರಾಮರಾವ್ ಆಟದ ಮೈದಾನದ ಸುತ್ತಲು ವಾಹನಗಳನ್ನು ದೀರ್ಘಕಾಲದಿಂದ ನಿಲ್ಲಿಸಲಾಗಿದ್ದು, ಸದರಿ ವಾಹನಗಳನ್ನು ತೆರವುಗೊಳಿಸಲು ಸಂಚಾರಿ ಪೋಲೀಸ್ ಅಧಿಕಾರಿಗಳಿಗೆ ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Swetha R
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 163, ಕತ್ರಿಗುಪ್ಪೆ

ಪ್ರತಿಯನ್ನು:

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್. ಆರ್. ವೃತ್ತ ರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ) ರವರ ಮಾಹಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು ((ಆಡಳಿತ) ರವರ ಮಾಹಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ) ರವರ ಮಾಹಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ವಾರ್ಡ್ ಸಮಿತಿ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
8. ಕಛೇರಿ ಪ್ರತಿ.